ಇ) ಹಿಂದುಳಿದ ವರ್ಗಗಳ ಪಟ್ಟಿಯಲ್ಲಿರುವ ಸದರಿ ಘೋಷಿತ ಜನಾಂಗಗಳಿಗೆ ಸಂಬಂಧಪಟ್ಟ ಎಲ್ಲಾ ಉಪ ವರ್ಗಗಳಿಗೂ ಸೌಲಭ್ಯವನ್ನು ವಿಸ್ತರಿಸುವ ದಿಶೆಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ಆದೇಶಕ್ಕೆ ತಿದ್ದುಪಡಿ ಮಾಡಲಾಗುವುದೇ?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು) :

ಅ) "ವಿವಿಧ ಸಮುದಾಯಗಳ ಅಭಿವೃದ್ಧಿಯಡಿ" ಕ್ಷತ್ರಿಯ, ಕುಂಬಾರ, ಕಂಬಾರ, ಮಡಿವಾಳ, ದೇವಾಂಗ, ಕುರುಬ, ವಿಶ್ವಕರ್ಮ, ಬಿಲ್ಲವ ಮುಂತಾದ ಜನಾಂಗದವರಿಗೆ ಸಮುದಾಯ ಭವನ/ವಿದ್ಯಾರ್ಥಿನಿಲಯದ ಕಟ್ಟಡ ನಿರ್ಮಾಣಕ್ಕಾಗಿ ರೂ.5.00 ಲಕ್ಷಗಳ ಆರ್ಥಿಕ ನೆರವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ಸದರಿ ಜನಾಂಗದ ವರಿಗೆ ಆರ್ಥಿಕ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

ಆ) ಮತ್ತು ಇ) ಇಂತಹ ಪ್ರಸ್ತಾವನೆಗಳನ್ನು ಪರಿಶೀಲಿಸಿ ಕ್ರಮ ಜರುಗಿಸಲಾಗುತ್ತಿದೆ.

**ಕ್ರಿಶ್ಚಿಯನ್ ಚರ್ಚ್‌ಗಳಿಂದ ಬರುವ ಆದಾಯ ಬಗ್ಗೆ**

363 ಶ್ರೀಮತಿ ಮಲ್ಲಿಕಾ ಪ್ರಸಾದ್(ಪುತ್ತೂರು), ವಿ.ಸ ಸದಸ್ಯರು, : ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದಲ್ಲಿ ಒಟ್ಟು ಇರುವ ಕ್ರಿಶ್ಚಿಯನ್ ಚರ್ಚುಗಳೆಷ್ಟು;

ಆ) ಕರ್ನಾಟಕ ರಾಜ್ಯದಲ್ಲಿರುವ ಕ್ರಿಶ್ಚಿಯನ್ ಚರ್ಚ್‌ಗಳಿಂದ ಸರ್ಕಾರಕ್ಕೆ ಕಳೆದ ಮೂರು ವರ್ಷಗಳಿಂದ ಬಂದ ಆದಾಯವೆಷ್ಟು;

ಇ) ಸರ್ಕಾರದ ಅಲ್ಪಸಂಖ್ಯಾತರ ಇಲಾಖೆ/ಇತರೆ ಇಲಾಖೆಯಿಂದ ಚರ್ಚುಗಳ ಅಭಿವೃದ್ಧಿಗೆ ಕಳೆದ ಮೂರು ವರ್ಷಗಳಲ್ಲಿ ಖರ್ಚು ಮಾಡಿದ ಮೊತ್ತವೆಷ್ಟು?

ಪ್ರೊ. ಡಾ: ಮುಮ್ತಾಜ್ ಅಲಿ ಖಾನ್, (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ರಾಜ್ಯದಲ್ಲಿ ಕ್ರಿಶ್ಚಿಯನ್ ಚರ್ಚ್‌ಗಳ ವ್ಯವಸ್ಥೆ ಬಗ್ಗೆ ಯಾವುದೇ ಅಧಿಕೃತ ಸರ್ಕಾರಿ ಸಂಸ್ಥೆ ಇಲ್ಲ. ಆದುದರಿಂದ ರಾಜ್ಯದಲ್ಲಿನ ಕ್ರಿಶ್ಚಿಯನ್ ಚರ್ಚ್‌ಗಳ ಸಂಖ್ಯಾಬಲದ ಮಾಹಿತಿ ಲಭ್ಯವಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

175 ಶ್ರೀ ಅಪ್ಪಾಸಾಹೇಬ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ ನಗರ) : ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆಯಲ್ಲಿ ಮಕ್ಕಳ ಸಂಖ್ಯೆ ಹೆಚ್ಚುತ್ತಿರುವುದರ ಅನುಗುಣವಾಗಿ ಅಂಗನವಾಡಿ ಕೇಂದ್ರಗಳು ಹಾಗೂ ಉಪ ಅಂಗನವಾಡಿ ಕೇಂದ್ರಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಿಜಾಪುರ ಜಿಲ್ಲೆಯಲ್ಲಿ ಪ್ರಸ್ತುತ ಇರುವ ಅಂಗನವಾಡಿ ಕೇಂದ್ರಗಳು ಹಾಗೂ ಉಪ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ಇವು ಯಾವಾಗ ಮಂಜೂರಾಗಿವೆ ಇವುಗಳಲ್ಲಿ ಎಷ್ಟು ಕೇಂದ್ರಗಳು ಕಟ್ಟಡಗಳ ಕೊರತೆಯನ್ನು ಎದುರಿಸುತ್ತಿವೆ (ವಿವರ ನೀಡುವುದು);

ಇ) ಬಿಜಾಪುರ ಜಿಲ್ಲೆಯಲ್ಲಿ ಕಳೆದ ಮೂರು ವರ್ಷದಿಂದ ಮಂಜೂರಾದ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು;

ಈ) ಹೊಸದಾಗಿ ಅಂಗನವಾಡಿ ಮತ್ತು ಉಪ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ಬಂದಿದೆ.

ಆ) ಬಿಜಾಪುರ ಜಿಲ್ಲೆಯಲ್ಲಿ 2062 ಅಂಗನವಾಡಿ ಕೇಂದ್ರಗಳು ಹಾಗೂ 44 ಮಿನಿ ಅಂಗನವಾಡಿ ಕೇಂದ್ರಗಳು ಒಟ್ಟು 2106 ಅಂಗನವಾಡಿ ಕೇಂದ್ರಗಳಿದ್ದು ಇವು 2005–06, 2007–08 ಹಾಗೂ 2009–10ರಲ್ಲಿ